Speed Post

ಕರ್ನಾಟಕ ಸರ್ಕಾರ

ಸಂಖ್ಯೆ: ಲಾ-ಎಲ್‌ಎಡಿ/489/2026

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಡಾ|| ಬಿ. ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 29.10.2026

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನ ಸೌಧ, ಬೆಂಗಳೂರು-560001.

ಇವರಿಗೆ,
ಸದಸ್ಯ ಕಾರ್ಯದರ್ಶಿ,
ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, "ನ್ಯಾಯ ದೇಗುಲ' ಮೊದಲನೇ ಮಹಡಿ, ಸಿದ್ದಯ್ಯ ರಸ್ತೆ, ಬೆಂಗಳೂರು -27.

ಮಾನ್ಯರೇ,

ವಿಷಯ: ಕರ್ನಾಟಕ ರಾಜ್ಯದಲ್ಲಿ ಬಾಕಿ ಉಳಿದಿರುವ ಪೋಲೀಸ್ ಇಲಾಖೆಯ ಟ್ರಾಫಿಕ್ ಚಲನ್ ಪ್ರಕರಣಗಳ ಪಾವತಿಗೆ ಶೇಕಡ 50 ರಷ್ಟು ದಂಡದ ಮೊತ್ತದಲ್ಲಿ ವಿನಾಯಿತಿ ನೀಡುವ ಕುರಿತು.

ಉಲ್ಲೇಖ: ತಮ್ಮ ಕಛೇರಿಯ ಪತ್ರ ಸಂಖ್ಯೆ: ಕರಾಕಾಸೇಪ್ರಾ: 09/NLA/2026, ದಿನಾಂಕ: 06.10.2026.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯದಲ್ಲಿ ಬಾಕಿ ಉಳಿದಿರುವ ಟ್ರಾಫಿಕ್ ಚಲನ್ ಪ್ರಕರಣಗಳ ಪಾವತಿಗೆ ಶೇ. 50ರಷ್ಟು ರಿಯಾಯಿತಿಯನ್ನು ನಿಗದಿಪಡಿಸುವುದಕ್ಕೆ ಸಂಬಂಧಿಸಿದಂತೆ, ಪೊಲೀಸ್ ಇಲಾಖೆಯ ಸಂಚಾರಿ E-Challanನಲ್ಲಿ ದಾಖಲಾಗಿರುವ ದಂಡದ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2025ರ ಅವಧಿಯಲ್ಲಿ ದಾಖಲಾಗಿ, ಪಾವತಿಗೆ ಬಾಕಿಯಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ. 50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ: 21.11.2026 ರಿಂದ ದಿನಾಂಕ: 11.12.2026 ರವರೆಗೆ ಕಾಲಾವಕಾಶ ನೀಡಿ ಸಾರಿಗೆ ಇಲಾಖೆಯಿಂದ ಆದೇಶ ಹೊರಡಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ.

ಆದ್ದರಿಂದ, ಆರ್ಥಿಕ ಇಲಾಖೆಯು ಸಹಮತಿಸಿರುವಂತೆ, ಪೊಲೀಸ್ ಇಲಾಖೆಯ ಸಂಚಾರಿ E-Challanನಲ್ಲಿ ದಾಖಲಾಗಿರುವ ದಂಡದ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2025ರ ಅವಧಿಯಲ್ಲಿ ದಾಖಲಾಗಿ, ಪಾವತಿಗೆ ಬಾಕಿಯಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ. 50ರಷ್ಟು ರಿಯಾಯಿತಿ ನೀಡಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ದಿನಾಂಕ: 21.11.2026ರಿಂದ ದಿನಾಂಕ: 11.12.2026ರವರೆಗೆ ಕಾಲಾವಕಾಶ ನೀಡುವ ಕುರಿತು ಆದೇಶ ಹೊರಡಿಸುವ ಬಗ್ಗೆ ಕ್ರಮವಹಿಸುವಂತೆ ಸಾರಿಗೆ ಇಲಾಖೆಗೆ ಪತ್ರ ಬರೆಯಲಾಗಿದೆ.

ಈ ಪತ್ರವನ್ನು ಆರ್ಥಿಕ ಇಲಾಖೆಯು ಹಿಂಬರಹ ಸಂಖ್ಯೆ: ಆಇ 52 ವೆಚ್ಚ-11 2023, ದಿನಾಂಕ: 28.10.2026ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ತಮ್ಮ ನಂಬುಗೆಯ,

29/10/26

(ಆದಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು ಮಾನವ
ಹಕ್ಕುಗಳ ಇಲಾಖೆ, (ಆಡಳಿತ-2)